ಪಿ.ಡಬ್ಲ್ಯು-02

**ಸಾಕ್ಷಿಯನ್ನು ದಿನಾಂಕಃ 04.07.2024 ರಂದು ಕರೆಸಿ ಪ್ರಮಾಣ ವಚನ ಬೋಧಿಸಲಾಯಿತು.**

**ಪಾಟೀ ಸವಾಲುಃ ಪ್ರತಿವಾದಿ ಪರ ಶ್ರೀ. ಎಂ.ಎನ್.ಆರ್. ವಕೀಲರಿಂದಃ**

ನಿ.ಪಿ.-4 ನ್ನು ಸೃಷ್ಟಿಸಿಕೊಂಡು ಹಾಜರುಪಡಿಸಿರುತ್ತೇನೆಂದರೆ ಸರಿಯಲ್ಲ. ನಿ.ಪಿ.-4 ನ್ನು ನೋಟರಿ ವಕೀಲರಾದ ಶ್ರೀನಿವಾಸರವರ ಬಳಿ ಮಾಡಿಸಿರುತ್ತೇನೆ. ನನ್ನ ತಾಯಿ ಆರೋಗ್ಯವಂತರಾಗಿದ್ದು, ವ್ಯವಸಾಯ ಮಾಡುತ್ತಿದ್ದಾರೆಂದರೆ ಅವರಿಗೆ ಆರೋಗ್ಯ ಸರಿ ಇರುವುದಿಲ್ಲ. ನನ್ನ ತಾಯಿಗೆ ಆರೋಗ್ಯ ಸರಿ ಇಲ್ಲವೆಂದು ತೋರಿಸಲು ದಾಖಲೆಯನ್ನು ಹಾಜರುಪಡಿಸಿಲ್ಲ. ನನ್ನ ತಾಯಿಗೆ 42 ವರ್ಷ ಪ್ರಾಯವಾಗಿರುತ್ತದೆಂದರೆ 50 ವರ್ಷಗಳಾಗಿರುತ್ತದೆ. ನಿ.ಪಿ.-4 ರಲ್ಲಿ ನನ್ನ ತಾಯಿಗೆ 42 ವರ್ಷ ಪ್ರಾಯ ಎಂದು ಬರೆದಿರುತ್ತಾರೆಂದರೆ ಸರಿ. ನನ್ನ ತಾಯಿ ನ್ಯಾಯಾಲಯಕ್ಕೆ ಬಂದು ಸಾಕ್ಷ್ಯ ನುಡಿದರೆ ನಿಜಾಂಶ ಗೊತ್ತಾಗುತ್ತದೆಂಬ ಉದ್ದೇಶದಿಂದ ನಿ.ಪಿ.-4 ನ್ನು ಸೃಷ್ಟಿ ಮಾಡಿ ಹಾಜರುಪಡಿಸಿರುತ್ತೇನೆಂದರೆ ಸರಿಯಲ್ಲ. ದಾವಾ ಸ್ವತ್ತು ಮೂಲತಃ ನನ್ನ ತಂದೆಯ ತಂದೆ ಜೋಗನಾಯಕರವರಿಗೆ ಸೇರಿದ ಆಸ್ತಿಯಾಗಿರುತ್ತದೆ. ದಾವಾ ಸ್ವತ್ತನ್ನು ನನ್ನ ಅಜ್ಜ ನನ್ನ ತಾಯಿಯ ಹೆಸರಿಗೆ ಖಾತೆ ಮಾಡಿಕೊಟ್ಟಿರುತ್ತಾರೆ. ನನ್ನ ಅಜ್ಜ ನನ್ನ ತಾಯಿಗೆ ಯಾವುದೇ ಪತ್ರವನ್ನು ಬರೆದುಕೊಟ್ಟಿರುವುದಿಲ್ಲ. ನನ್ನ ತಾತ ಜೋಗನಾಯಕನ ಮಗ ಎಂದರೆ ಸರಿ. ಜೋಗನಾಯಕರಿಂದ ಅವರ ಹೆಂಡತಿ ಕರಗಮ್ಮರವರಿಗೆ ಖಾತೆಯಾಗಿರುತ್ತದೆಂದು ತೋರಿಸಲು ದಾಖಲೆಯನ್ನು ಹಾಜರುಪಡಿಸಿಲ್ಲ. ದಾವಾ ಸ್ವತ್ತು ನನ್ನ ತಾತನಿಗೆ ಹೇಗೆ ಬಂದಿರುತ್ತದೆಂದು ನನಗೆ ಗೊತ್ತಿಲ್ಲ.

**ಈ ಹಂತದಲ್ಲಿ ಮಾನ್ಯ ಪ್ರತಿವಾದಿ ಪರ ವಕೀಲರು ಮುಂದಿನ ಪಾಟೀ ಸವಾಲಿಗಾಗಿ ಸಮಯ ಕೋರಿರುತ್ತಾರೆ. ಸಮಯ ನೀಡಲಾಯಿತು.**

(ಸಾಕ್ಷಿಯ ಹೇಳಿಕೆಯನ್ನು ನನ್ನ ಉಕ್ತಲೇಖನದಂತೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು.)

**ಓ ಹೇ ಕೇ ಸಾ ಸ ಇ ಒ.,**

**ಸಿವಿಲ್ ಜಡ್ಜ್ ಮತ್ತು ಜೆ.ಎಂ.ಎಫ್.ಸಿ.,**

**ಹೆಗ್ಗಡದೇವನಕೋಟೆ.**